Phone: 08282-257424
E-Mail: kuhrmsection@gmail.com

Fax: 08282-256262
Website: www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

ವಿಶ್ವವಿದ್ಯಾಲಯ ಕಾರ್ಯಾಲಯ, ಜ್ಞಾನ ಸಹ್ಯಾದ್ರಿ ಶಂಕರಘಟ್ಟ – 577 451

## ಮಾನವ ಸಂಪನ್ಮೂಲ ಮತ್ತು ನಿರ್ವಹಣೆ ವಿಭಾಗ

ಸಂಖ್ಯೆ: ಕುವಿ: ಮಾಸನಿ–7/ 820 /2020–21 ದಿನಾಂಕ:06–07–2020

## ಸುತ್ತೋಲೆ

ವಿಷಯ: ಕೋವಿಡ್–19 (ಕೊರೊನಾ ವೈರಸ್) ನಿಯಂತ್ರಿಸುವ ಹಿನ್ನೆಲೆಯಲ್ಲಿ ವಿಶ್ವವಿದ್ಯಾಲಯ ಹಾಗೂ ಘಟಕ ಮತ್ತು ನೇರ ಆಡಳಿತಕ್ಕೊಳಪಟ್ಟ ಕಾಲೇಜುಗಳ ಬೋಧಕೇತರ / ಏಜೆನ್ಸಿ ಸಿಬ್ಬಂದಿಗಳಿಗೆ ರಜೆ ಘೋಷಿಸುವ ಕುರಿತು.

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 139 ಯುಎನ್‌ಇ 2020 ದಿನಾಂಕ: 04–07–2020
2. ದಿನಾಂಕ:06–07–2020 ರಂದು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ನಡೆದ ಅಧಿಕಾರಿಗಳ ಸಭೆಯ ನಡಾವಳಿ.
3. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:06–07–2020

****

ಸರ್ಕಾರದ ಸುತ್ತೋಲೆಯನುಸಾರ ಮಾನ್ಯ ಕುಲಪತಿಗಳ ಆದೇಶದ ಮೇರೆಗೆ, ವಿಶ್ವವಿದ್ಯಾನಿಲಯದಲ್ಲಿ ಕೋವಿಡ್–19 (ಕೊರೊನಾ ವೈರಸ್) ತಡೆಗಟ್ಟುವಿಕೆ ಸಂಬಂಧ ವಿಶ್ವವಿದ್ಯಾಲಯದ ಕಛೇರಿಗಳು / ವಿಶ್ವವಿದ್ಯಾಲಯ ಸ್ನಾತಕೋತ್ತರ ಅಧ್ಯಯನ ವಿಭಾಗಗಳು / ಸ್ನಾತಕೋತ್ತರ ಕೇಂದ್ರ, ಕಡೂರು / ಚಿಕ್ಕಮಗಳೂರು ಹಾಗೂ ಘಟಕ ಮತ್ತು ನೇರ ಆಡಳಿತಕ್ಕೊಳಪಟ್ಟ ಕಾಲೇಜುಗಳ ಕಛೇರಿಗಳಿಗೆ / ವಿಭಾಗಗಳಿಗೆ ದಿನಾಂಕ: 07–07–2020 ರಿಂದ 15–07–2020ರವರೆಗೆ ರಜೆ ಘೋಷಿಸಲಾಗಿದೆ.

ಮುಂದುವರೆದು, ಸರ್ಕಾರದ ಸುತ್ತೋಲೆ ಅನ್ವಯ ಬೋಧಕೇತರ ಸಿಬ್ಬಂದಿಗಳಿಗೆ ಈ ಕೆಳಕಂಡಂತೆ ಕರ್ತವ್ಯಕ್ಕೆ ಹಾಜರಾಗುವಂತೆ ಸೂಚಿಸಿದೆ.

1. ಆಯಾಯ ವಿಭಾಗಗಳ ಮುಖ್ಯಸ್ಥರುಗಳು ಸೂಚಿಸುವ ಕೆಲಸಗಳ ಅವಶ್ಯಕತೆಗೆ ಅನುಗುಣವಾಗಿ ಬೋಧಕೇತರ ಸಿಬ್ಬಂದಿಗಳು ಕರ್ತವ್ಯಕ್ಕೆ ಹಾಜರಾಗುವುದು.
2. ಈ ರಜಾ ಅವಧಿಯಲ್ಲಿ ಬೋಧಕೇತರ / ಏಜೆನ್ಸಿ ಸಿಬ್ಬಂದಿ ವರ್ಗದವರು ಯಾವುದೇ ಕಾರಣಕ್ಕೂ ಕೇಂದ್ರಸ್ಥಾನವನ್ನು ಬಿಡತಕ್ಕದ್ದಲ್ಲ. ಸರ್ಕಾರಕ್ಕೆ / ವಿಶ್ವವಿದ್ಯಾಲಯಕ್ಕೆ ಅಗತ್ಯವಿದ್ದಾಗ ಕಡ್ಡಾಯವಾಗಿ ಸೇವೆಗೆ ಹಾಜರಾಗತಕ್ಕದ್ದು.
3. ವಿಶ್ವವಿದ್ಯಾಲಯದ ಆರೋಗ್ಯ ಕೇಂದ್ರ ಸಿಬ್ಬಂದಿಗಳು ಎಂದಿನಂತೆ ಕಾರ್ಯ ನಿರ್ವಹಿಸುವುದು, ಇನ್ನುಳಿದ ಅಧಿಕಾರಿಗಳು / ಸಿಬ್ಬಂದಿಗಳು ಅಗತ್ಯ ಮತ್ತು ತುರ್ತು ಸಂದರ್ಭದಲ್ಲಿ ಕಛೇರಿಗೆ ಹಾಜರಾಗಿ ಕರ್ತವ್ಯ ನಿರ್ವಹಿಸುವುದು.

ಮಾನ್ಯ ಕುಲಪತಿಗಳ ಅನುಮೋದನೆಯಾಗಿದೆ

6/7/20

ಉಪ ಕುಲಸಚಿವ

ಉಪ ಕುಲಸಚಿವ
ಮಾನವ ಸಂಪನ್ಮೂಲ ಮತ್ತು ನಿರ್ವಹಣೆ ವಿಭಾಗ
ಕುವೆಂಪು ವಿಶ್ವವಿದ್ಯಾನಿಲಯ,
ಜ್ಞಾನ ಸಹ್ಯಾದ್ರಿ
ಶಂಕರಘಟ್ಟ–577 451.

ಗೆ:

1. ಕುಲಸಚಿವರು(ಪರೀಕ್ಷಾಂಗ), ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
2. ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
3. ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಮುಖ್ಯಸ್ಥರುಗಳಿಗೆ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ/ ಶಿವಮೊಗ್ಗ/ಕಡೂರು.
4. ಗ್ರಂಥಪಾಲಕರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
5. ಕಾರ್ಯಪಾಲಕ ಅಭಿಯಂತರರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.